ಕ್ರ.ಸಂ. 5

## ಮಾನ್ಯ ಕರ್ನಾಟಕ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು, ಶ್ರೀ ಕೆ.ಎ. ತಿಪ್ಪೇಸ್ವಾಮಿ, ಡಾ: ಸೂರಜ್ ರೇವಣ್ಣ, ಇವರುಗಳು ನಿಯಮ 72 ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.

**ವಿಷಯ:**

ಪ್ರಾದೇಶಿಕ ಅಸಮತೋಲನವನ್ನು ನೀಗಿಸುವ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿರುವ ಜಿಲ್ಲೆಗಳಲ್ಲಿ ಉನ್ನತ ಶಿಕ್ಷಣದ ವಾರ್ಷಿಕ ನೋಂದಣಿ ಅನುಪಾತವನ್ನು ಸುಧಾರಿಸುವ ನಿಟ್ಟಿನಲ್ಲಿ ಮಾದರಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಿ, ಅಲ್ಲಿನ ಸಮುದಾಯಕ್ಕೆ ಅವಕಾಶವನ್ನು ಸ್ಥಳೀಯವಾಗಿ ಕಲ್ಪಿಸಿ, ಯುವಜನಾಂಗವನ್ನು ದೇಶದ ಫಲಪ್ರದವಾಗಿ ಬೆಳೆಸಲು ಸಹಯೋಗ ನೀಡುವ ನಿಟ್ಟಿನಲ್ಲಿ ಹೊಸ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲಾಗಿದೆ. ಹೀಗೆ ಸ್ಥಾಪನೆಯಾಗಿರುವ ಹಲವು ವಿಶ್ವವಿದ್ಯಾಲಯಗಳಲ್ಲಿ ಸಂಯೋಜಿತ ಕಾಲೇಜುಗಳ ಸಂಖ್ಯೆಯು ಹಳೆಯ ವಿಶ್ವವಿದ್ಯಾಲಯಗಳ ರೀತಿಯಲ್ಲಿ ಇಲ್ಲದೇ ಇರುವುದು, ಸ್ವಂತ ಕಟ್ಟಡ ಇಲ್ಲದೇ ಇರುವುದು ಹಾಗೂ ಖಾಯಂ ಸ್ವರೂಪದ ಬೋಧಕ, ಬೋಧಕೇತರ ಸಿಬ್ಬಂದಿ, ಆರ್ಥಿಕ ಮುಗ್ಗಟ್ಟು, ಸರ್ಕಾರದಿಂದ ಅನುದಾನ ಇಲ್ಲದೇ ಇರುವುದು ಮುಂತಾದ ಹಲವಾರು ಸಮಸ್ಯೆಗಳಿಂದ ನೂತನ ವಿಶ್ವವಿದ್ಯಾಲಯಗಳು ಸೊರಗಿ ನಿಂತಿವೆ. ಹಲವಾರು ವಿಶ್ವವಿದ್ಯಾಲಯಗಳು ಇನ್ನೂ ಸ್ನಾತಕೋತ್ತರ ಕೇಂದ್ರಗಳ ಸ್ವರೂಪದಲ್ಲೇ ಕಾರ್ಯನಿರ್ವಹಿಸುತ್ತಿವೆ. ಅದರಲ್ಲೂ ಕಲ್ಯಾಣ ಕರ್ನಾಟಕ ಜನರ ಬೇಡಿಕೆ ಮತ್ತು ಆಶೋತ್ತರಗಳಿಗೆ ಸ್ಪಂದಿಸುವ ಹಾಗೂ ಪ್ರಾದೇಶಿಕ ಅಸಮತೋಲನವನ್ನು ನಿರ್ಮೂಲನೆ ಮಾಡುವ ಮತ್ತು ಜಿಲ್ಲೆಗಳ ಉನ್ನತ ಶಿಕ್ಷಣದ ವಾರ್ಷಿಕ ನೋಂದಣಿ ಅನುಪಾತವನ್ನು ಸುಧಾರಿಸುವ ನಿಟ್ಟಿನಲ್ಲಿ ತೆರೆದಿರುವ ಜಿಲ್ಲಾ ಮಟ್ಟದಲ್ಲಿರುವ ವಿಶ್ವವಿದ್ಯಾಲಯಗಳು ಇನ್ನೂ ಟೇಕಾಫ್ ಆಗಿರುವುದಿಲ್ಲ. ಇಂತಹ ಸಾರ್ವಜನಿಕ ಮಹತ್ವದ ವಿಶಯದ ಬಗ್ಗೆ ಸರ್ಕಾರದ ಗಮನ ಸೆಳೆಯಬಯಸುತ್ತೇನೆ.

**ಸರ್ಕಾರದ ಉತ್ತರ:**

2022-23ನೇ ಸಾಲಿನ ಆಯವ್ಯಯ ಕಂಡಿಕೆ 103ರಲ್ಲಿ ಈ ಕೆಳಗಿನಂತೆ ಘೋಷಿಸಲಾಗಿದೆ;

> **"ಕಾಲೇಜುಗಳ ಮೇಲ್ವಿಚಾರಣೆಯನ್ನು ಸುಧಾರಿಸಲು ರಾಜ್ಯದ ಶೈಕ್ಷಣಿಕವಾಗಿ ಹಿಂದುಳಿದ ಪ್ರದೇಶಗಳಲ್ಲಿ ವಿನೂತನ ಮಾದರಿಯ 07 ವಿಶ್ವವಿದ್ಯಾಲಯಗಳನ್ನು ಚಾಮರಾಜನಗರ, ಹಾಸನ, ಬೀದರ್, ಕೊಪ್ಪಳ, ಹಾವೇರಿ, ಕೊಡಗು ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಸ್ಥಾಪಿಸಲಾಗುವುದು. ಈ ವಿಶ್ವವಿದ್ಯಾಲಯಗಳು ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಕಾರ್ಯನಿರ್ವಹಿಸಲಿದೆ. ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ಬಳಸುವ ಈ ವಿಶ್ವವಿದ್ಯಾಲಯಗಳಿಗೆ ವಾರ್ಷಿಕ ತಲಾ ರೂ. 2.00 ಕೋಟಿಗಳ ಆವರ್ತಕ ವೆಚ್ಚ ಬಳಸಿ ಕಾರ್ಯನಿರ್ವಹಿಸಲಿವೆ."**

ಮೇಲ್ಕಂಡ ಆಯವ್ಯಯ ಘೋಷಣೆಯಂತೆ ಹಿಂದಿನ ಸರ್ಕಾರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ ಪ್ರಕರಣ -3 ಹಾಗೂ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ಅಧಿನಿಯಮ, 2022 ರನ್ವಯ ನೂತನವಾಗಿ ಸ್ಥಾಪಿಸಲ್ಪಟ್ಟ ಚಾಮರಾಜನಗರ, ಹಾಸನ, ಬೀದರ್, ಕೊಪ್ಪಳ, ಹಾವೇರಿ, ಕೊಡಗು ಮತ್ತು ಬಾಗಲಕೋಟೆ ಜಿಲ್ಲೆಗಳ ಮೇಲೆ ಪ್ರಾದೇಶಿಕ ಅಧಿಕಾರ ವ್ಯಾಪ್ತಿಯನ್ನು ಹೊಂದಿರುವ ಸಂಯೋಜನೆಗೊಳಿಸುವ ವಿಶ್ವವಿದ್ಯಾಲಯಗಳನ್ನಾಗಿ ನೂತವಾಗಿ ಸ್ಥಾಪಿಸಲಾಗಿರುತ್ತದೆ. ಅದರನ್ವಯ ಸರ್ಕಾರದ ಆದೇಶ ಸಂಖ್ಯೆ: ಇಡಿ 81 ಯುಎನ್ಇ 2022, ದಿನಾಂಕ: 05.11.2022ರಲ್ಲಿ ಈ ನೂತನ ವಿಶ್ವವಿದ್ಯಾಲಯಗಳು ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ರೂ. 2.00 ಕೋಟಿಗಳ ಆವರ್ತಕ ವೆಚ್ಚದಲ್ಲಿ ಕಾರ್ಯನಿರ್ವಹಿಸಲು ಕೆಲವು ಷರತ್ತುಗಳನ್ನು ವಿಧಿಸಿ ಆದೇಶಿಸಿದೆ.

ಸರ್ಕಾರದ ಆದೇಶ ಸಂ. ಇಡಿ 81 ಯುಎನ್ಇ 2022, ದಿನಾಂಕ:18.03.2022 ರನ್ವಯ ರಚಿಸಲಾದ ಸಮಿತಿಯು ನೂತನವಾಗಿ ಸ್ಥಾಪಿತವಾಗಿರುವ ವಿಶ್ವವಿದ್ಯಾಲಯಗಳು ಸುಗಮವಾಗಿ ಕಾರ್ಯನಿರ್ವಹಿಸಲು ಮಾತೃ ವಿಶ್ವವಿದ್ಯಾಲಯಗಳಿಂದ ವಿಭಜಿಸಲ್ಪಟ್ಟ ಪ್ರಾದೇಶಿಕ ಅಧಿಕಾರ ವ್ಯಾಪ್ತಿ ಮತ್ತು ಕಾರ್ಯಭಾರದ ಆಧಾರದ ಮೇಲೆ ಸ್ಥಳಾಂತರಿಸಬೇಕಾದ ಬೋಧಕ ಮತ್ತು ಬೋಧಕೇತರ ಹುದ್ದೆಗಳು, ಸಂಯೋಜಿತ ಕಾಲೇಜುಗಳು, ಸ್ನಾತಕೋತ್ತರ ಕೇಂದ್ರಗಳು ಮತ್ತು ಚರಾಸ್ತಿ ಮತ್ತು ಸ್ಥಿರಾಸ್ತಿಗಳ ಹಂಚಿಕೆ ಬಗ್ಗೆ ಸಲ್ಲಿಸಿರುವ ವರದಿಯನ್ನು ಸರ್ಕಾರವು ಒಪ್ಪಿ, ಸರ್ಕಾರದ ಆದೇಶ ಸಂ. ಇಡಿ 81 ಯುಎನ್ಇ 2022, ದಿನಾಂಕ:18.08.2023, ಇಡಿ 81 ಯುಎನ್ಇ 2022 (4), ದಿನಾಂಕ:18.08.2023, ಇಡಿ 81 ಯುಎನ್ಇ 2022(1), ದಿನಾಂಕ:18.08.2023, ಇಡಿ 81 ಯುಎನ್ಇ 2022(5), ದಿನಾಂಕ:18.08.2023 ಗಳನ್ವಯ ಸಂಬಂಧಪಟ್ಟ ಹೊಸ ವಿಶ್ವವಿದ್ಯಾಲಯಗಳಿಗೆ ಕೆಲವು ಷರತ್ತು ಮತ್ತು ನಿಬಂಧನೆಗೊಳಪಟ್ಟು ಸ್ಥಳಾಂತರಿಸಿ ಹಂಚಿಕೆ ಮಾಡಿ ಆದೇಶಿಸಿದೆ.

2022-23 ನೇ ಸಾಲಿನ ಆಯವ್ಯಯ ಘೋಷಣೆಯನ್ವಯ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ ಕಾರ್ಯನಿರ್ವಹಿಸಲಿರುವ ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ, ಸೌಲಭ್ಯಗಳನ್ನು ಬಳಸುವ ಪ್ರಸ್ತಾಪಿತ ನೂತನ ವಿಶ್ವವಿದ್ಯಾಲಯಗಳಿಗೆ ಹಂಚಿಕೆಯಾದ ವಾರ್ಷಿಕ ರೂ.2.00 ಕೋಟಿಗಳ ಆವರ್ತಕ ವೆಚ್ಚದಲ್ಲಿ ಸರ್ಕಾರದ ಆದೇಶ ಸಂ. ಇಡಿ 190 ಹೆಚ್‌ಪಿಯು 2022, ದಿನಾಂಕ:06.11.2023 ರಲ್ಲಿ 2023-24 ನೇ ಸಾಲಿನ ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲಾಗಿರುವ ಚಾಮರಾಜನಗರ ವಿಶ್ವವಿದ್ಯಾಲಯ, ಹಾಸನ ವಿಶ್ವವಿದ್ಯಾಲಯ, ಬೀದರ್ ವಿಶ್ವವಿದ್ಯಾಲಯ, ಕೊಪ್ಪಳ ವಿಶ್ವವಿದ್ಯಾಲಯ, ಹಾವೇರಿ ವಿಶ್ವವಿದ್ಯಾಲಯ, ಕೊಡಗು ವಿಶ್ವವಿದ್ಯಾಲಯ ಮತ್ತು ಬಾಗಲಕೋಟೆ ವಿಶ್ವವಿದ್ಯಾಲಯಗಳಿಗೆ ವೇತನ ಪಾವತಿಗಾಗಿ ತಲಾ ರೂ.100.00 ಲಕ್ಷಗಳಂತೆ ಲೆಕ್ಕ ಶೀರ್ಷಿಕೆ 2202-03-102-0-45-101 ಸಹಾಯಾನುದಾನ-ವೇತನಗಳಡಿಯಲ್ಲಿ ಒಟ್ಟು ರೂ.700.00 ಲಕ್ಷಗಳ ಪುನರ್ವಿನಿಯೋಗದ ಮೂಲಕ ಬಿಡುಗಡೆಗೊಳಿಸಿ ಆದೇಶಿಸಿದೆ.

ಪ್ರಸ್ತಾಪಿತ ನೂತನ ವಿಶ್ವವಿದ್ಯಾಲಯಗಳಿಗೆ ಮಾತೃ ವಿಶ್ವವಿದ್ಯಾಲಯಗಳಿಂದ ವರ್ಗಾವಣೆ ಮಾಡಿರುವ ಬೋಧಕ-ಬೋಧಕೇತರ ಹುದ್ದೆಗಳಿಗೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 58 ರನ್ವಯ ಕ್ರಮವಹಿಸುವ ಕುರಿತು ಅವಕಾಶವನ್ನು ಕಲ್ಪಿಸಿದ್ದು, ಅದರನ್ವಯ ಸರ್ಕಾರದ ಹಂತದಲ್ಲಿ ನೂತನ ವಿಶ್ವವಿದ್ಯಾಲಯಗಳಿಗೆ ಪ್ರಸ್ತಾಪಿತ ಬೋಧಕ-ಬೋಧಕೇತರ ಸೇವಾ ಭದ್ರತೆಗೆ ಸಂಬಂಧಿಸಿದಂತೆ ನಿರ್ದೇಶನ ನೀಡಲು ಕ್ರಮವಹಿಸಲಾಗುತ್ತಿದೆ.

ಈ ರೀತಿ ವಿನೂತನವಾಗಿ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯಗಳ ಕಾರ್ಯವೈಖರಿ ಮತ್ತು ಸಾಧಕ-ಬಾಧಕಗಳನ್ನು ಗಮನದಲ್ಲಿಸಿಕೊಂಡು ಮುಂದಿನ ತೀರ್ಮಾನಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ.

**********************

ಸಂಖ್ಯೆ: ಇಡಿ 249 ಯುಎನ್‌ಇ 2023

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು